ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆಯ ವ್ಯಾಪ್ತಿಯ ತ್ಯಾಜ್ಯ ವಿಲೇವಾರಿಗೆ ಶಾಶ್ವತ ಯೋಜನೆ ರೂಪಿಸಿರುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) -

27 (138) ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆಯ ವ್ಯಾಪ್ತಿಯಲ್ಲಿ ಪ್ರತಿದಿನ ಉತ್ಪಾದನೆಯಾಗುತ್ತಿರುವ ತ್ಯಾಜ್ಯದ ಪ್ರಮಾಣವೆಷ್ಟು ;

(ಆ) ಈ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಮಡಿಕೇರಿ ನಗರ ಸಭೆಗೆ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ವಿವಿಧ ಯೋಜನೆಗಳ ಮೂಲಕ ಕಳೆದ ಮೂರು ವರ್ಷಗಳಿಂದ ಬಂದಿರುವ ಅನುದಾನವೆಷ್ಟು ;

(ಈ) ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಶಾಶ್ವತ ಯೋಜನೆ ಇದುವರೆಗೂ ಅನುಷ್ಠಾನಗೊಳ್ಳದಿರಲು ಕಾರಣಗಳೇನು ?